ಭಾಗ್ಯಲಕ್ಷ್ಮಿ ಬಾಂಡ್‌ಗಳ ವಿತರಣೆ

2445(2464); ಡಾ॥ ರಫೀಕ್ ಅಹ್ಮದ್ ಎಸ್. (ತುಮಕೂರು)

ಅ) ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಭಾಗ್ಯಲಕ್ಷ್ಮಿ ಯೋಜನೆಯಲ್ಲಿ ಅರ್ಜಿಗಳು ತಿರಸ್ಕೃತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಅರ್ಜಿಗಳು ತಿರಸ್ಕೃತವಾಗಿರುವುದಕ್ಕೆ ಕಾರಣವೇನು;

ಇ) ಸದರಿ ಅರ್ಜಿದಾರರಿಗೆ ಬಾಂಡ್ ವಿತರಿಸಲು ಸರ್ಕಾರದ ವತಿಯಿಂದ ಕ್ರಮಕೈಗೊಳ್ಳಲಾಗುವುದೇ; ಇದರ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು?

ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.)

ಅ) ಬಂದಿದೆ

ಆ) 2008–09ನೇ ಸಾಲಿನ 25 ಅರ್ಜಿಗಳಲ್ಲಿ, 9 ಅರ್ಜಿಗಳನ್ನು ಒಂದು ವರ್ಷದ ನಂತರ ಸಲ್ಲಿಸಿರುತ್ತಾರೆ. ಉಳಿದ 16 ಅರ್ಜಿಗಳು ಆಡಳಿತಾತ್ಮಕ ಹಾಗೂ ತಾಂತ್ರಿಕ ಕಾರಣಗಳಿಂದ ತಿರಸ್ಕೃತಗೊಂಡಿರುತ್ತವೆ.

ಇ) 9 ಅರ್ಜಿಗಳ ಸಾಧಕ ಬಾಧಕಗಳನ್ನು ಪರಿಶೀಲಿಸಿ, ಬಾಂಡ್‌ಗಳನ್ನು ನೀಡುವ ಬಗ್ಗೆ ಪರಿಶೀಲಿಸಲಾಗುವುದು.